# ವಿಶ್ವವಿದ್ಯಾನಿಲಯ ವಿಜ್ಞಾನ ಕಾಲೇಜು, ತುಮಕೂರು

(ತುಮಕೂರು ವಿಶ್ವವಿದ್ಯಾನಿಲಯದ ಘಟಕ ಕಾಲೇಜು)

ಬಿ.ಹೆಚ್. ರಸ್ತೆ, ತುಮಕೂರು. 572103 ದೂ.ಸಂ: 0816–2260220

ಸಂಖ್ಯೆ:ವಿವಿಕಾತು:2024–25:380. ದಿನಾಂಕ:26.10.2024

**:ದರಪಟ್ಟಿ ಆಹ್ವಾನ:**

**ವಿಷಯ:** ವಿಶ್ವವಿದ್ಯಾನಿಲಯ ವಿಜ್ಞಾನ ಕಾಲೇಜಿನ ತರಗತಿಗಳಿಗೆ ಅಗತ್ಯವಿರುವ ವೈಟ್ ಬೋರ್ಡ್‌ಗಳನ್ನು ಸರಬರಾಜು ಪಡೆಯಲು ದರಪಟ್ಟಿ ಆಹ್ವಾನಿಸುತ್ತಿರುವ ಕುರಿತು.

*******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ವಿಶ್ವವಿದ್ಯಾನಿಲಯ ವಿಜ್ಞಾನ ಕಾಲೇಜಿನ ತರಗತಿಗಳಿಗೆ ಅವಶ್ಯವಿರುವ ವೈಟ್ ಬೋರ್ಡ್‌ಗಳನ್ನು ಸರಬರಾಜು ಮಾಡಲು ಕೆಳಕಂಡ ವಿವರ ಮತ್ತು ಷರತ್ತುಗಳಿಗೊಳಪಟ್ಟು ಆಸಕ್ತ ಸಂಸ್ಥೆಗಳಿಂದ ದರಪಟ್ಟಿಯನ್ನು ಆಹ್ವಾನಿಸಲಾಗಿದೆ.

<table>
<tr><th>Sl. No</th><th>Specifications</th><th>Size</th><th>Quantity</th><th>Rate to be quoted per Quantity (Incl. of all texes)</th></tr>
<tr><td>01</td><td>White Boards:<br>• Magnetic White Board with Aluminium Beading.</td><td rowspan="2">8X4</td><td rowspan="2">08 No's</td><td></td></tr>
<tr><td>02</td><td>• Non Magnetic White Board with Aluminium Beading.</td><td></td></tr>
</table>

**ಷರತ್ತು ಮತ್ತು ನಿಬಂಧನೆಗಳು:**

01. ಮುಚ್ಚಿದ ಲಕೋಟೆಯ ಮೇಲೆ **"ವಿಶ್ವವಿದ್ಯಾನಿಲಯ ವಿಜ್ಞಾನ ಕಾಲೇಜಿಗೆ ವೈಟ್ ಬೋರ್ಡ್‌ಗಳನ್ನು ಸರಬರಾಜು ಮಾಡಲು ದರಪಟ್ಟಿ"** ಎಂದು ಸ್ಪಷ್ಟವಾಗಿ ನಮೂದಿಸುವುದು.
02. ದರಪಟ್ಟಿಯನ್ನು, **"ಪ್ರಾಂಶುಪಾಲರು, ವಿಶ್ವವಿದ್ಯಾನಿಲಯ ವಿಜ್ಞಾನ ಕಾಲೇಜು, ಬಿ.ಹೆಚ್ ರಸ್ತೆ, ತುಮಕೂರು–572103"** ಇವರಿಗೆ ಮುದ್ದಾಂ ಅಥವಾ ಅಂಚೆಯ ಮೂಲಕ ತಲುಪಿಸಬಹುದು. ಅಂಚೆಯ ವಿಳಂಬಕ್ಕೆ ಅಥವಾ ಅಂಚೆಯು ತಲುಪದಿದ್ದಲ್ಲಿ ವಿಶ್ವವಿದ್ಯಾನಿಲಯ ವಿಜ್ಞಾನ ಕಾಲೇಜು ಜವಾಬ್ದಾರಿಯಾಗುವುದಿಲ್ಲ.
03. ದರಪಟ್ಟಿಯನ್ನು ಸಲ್ಲಿಸಲು ಕೊನೆಯ ದಿನಾಂಕ: 06.11.2024 ಅಪರಾಹ್ನ 4.00 ಗಂಟೆಯವರೆಗೆ ಸಲ್ಲಿಸಬಹುದಾಗಿರುತ್ತದೆ.
04. ದರಪಟ್ಟಿಯನ್ನು ದಿನಾಂಕ:06.11.2024 ರಂದು ಅಪರಾಹ್ನ 4.30 ಗಂಟೆಗೆ ತೆರೆಯಲಾಗುವುದು.
05. ಸರಬರಾಜು ಸಂಸ್ಥೆಯವರು ತಮ್ಮ ಸಂಸ್ಥೆಯ GSTIN NO ಮತ್ತು PAN NO ದಾಖಲೆಗಳನ್ನು ಕಡ್ಡಾಯವಾಗಿ ದರಪಟ್ಟಿಯ ಜೊತೆಗೆ ಲಗತ್ತಿಸಬೇಕು.
06. ದರಪಟ್ಟಿಯಲ್ಲಿ ನಮೂದಿಸಿದ ದರಗಳು ತೆರಿಗೆ ಮತ್ತು ಸಾಗಾಣಿಕೆ ವೆಚ್ಚವನ್ನು ಒಳಗೊಂಡಿರತಕ್ಕದ್ದು.
07. **ಸಾಮಗ್ರಿಗಳ ಪ್ರಮಾಣಗಳನ್ನು ಹೆಚ್ಚಿಸುವ ಅಥವಾ ಕಡಿಮೆಗೊಳಿಸುವ ಹಕ್ಕನ್ನು ವಿಶ್ವವಿದ್ಯಾನಿಲಯ ವಿಜ್ಞಾನ ಕಾಲೇಜು ಕಾಯ್ದಿರಿಸಿಕೊಂಡಿರುತ್ತದೆ.**
08. ದರಪಟ್ಟಿಗಳನ್ನು ಯಾವುದೇ ಕಾರಣ ನೀಡದೆ ಅಂಗೀಕರಿಸುವ ಅಥವಾ ತಿರಸ್ಕರಿಸುವ ಸಂಪೂರ್ಣ ಹಕ್ಕನ್ನು ವಿಶ್ವವಿದ್ಯಾನಿಲಯ ವಿಜ್ಞಾನ ಕಾಲೇಜು ಒಳಗೊಂಡಿರುತ್ತದೆ.
09. ಷರತ್ತುಬದ್ಧ ದರಪಟ್ಟಿಗಳನ್ನು ಪರಿಗಣಿಸಲಾಗುವುದಿಲ್ಲ.
10. ಪ್ರತಿ ಸಂಸ್ಥೆಯವರು ಒಂದು ದರಪಟ್ಟಿಯನ್ನು ಮಾತ್ರ ಸಲ್ಲಿಸತಕ್ಕದ್ದು.

11. ಸರಬರಾಜು ಆದೇಶದಲ್ಲಿ ನೀಡುವ ಎಲ್ಲಾ ಷರತ್ತುಗಳನ್ನು ಪಾಲಿಸಬೇಕು.
12. ಹೆಚ್ಚಿನ ವಿವರಗಳು ಅಥವಾ ಮಾಹಿತಿಯ ಅಗತ್ಯವಿದ್ದಲ್ಲಿ ಪ್ರಾಂಶುಪಾಲರು, ವಿಶ್ವವಿದ್ಯಾನಿಲಯ ವಿಜ್ಞಾನ ಕಾಲೇಜು, ತುಮಕೂರು ಇವರನ್ನು ಸಂಪರ್ಕಿಸುವುದು.

ಪ್ರಾಂಶುಪಾಲರು
ಪ್ರಾಂಶುಪಾಲರು
ವಿಶ್ವವಿದ್ಯಾನಿಲಯ ವಿಜ್ಞಾನ ಕಾಲೇಜು
ತುಮಕೂರು-572103

**ಪ್ರತಿಗಳು:**

01. ಶ್ರೀ. ಹರೀಶ್ ಕುಮಾರ್ ಕೆ, ಸಂಯೋಜಕರು, ವೆಬ್ ಸೈಟ್ ಸಮಿತಿ, ವಿಶ್ವವಿದ್ಯಾನಿಲಯ ವಿಜ್ಞಾನ ಕಾಲೇಜು, ತುಮಕೂರು–ಕಾಲೇಜಿನ ವೆಬ್ ಸೈಟ್‌ನಲ್ಲಿ ಇಂದೇ ಪ್ರಕಟಿಸಲು ಸೂಚಿಸಿದೆ.
02. ಸೂಚನಾ ಫಲಕಕ್ಕೆ, ವಿಶ್ವವಿದ್ಯಾನಿಲಯ ವಿಜ್ಞಾನ ಕಾಲೇಜು, ತುಮಕೂರು.
03. ಕಛೇರಿ ಪ್ರತಿ.